ಕರ್ನಾಟಕ ಸರ್ಕಾರ
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ**
**ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು-560001**

---

**ಸಂಖ್ಯೆ :ಎಡಿಎಂ2(4): ಡೆಂ.ಮು.ಕ್ರ-01/2024-25.** **ದಿನಾಂಕ : 10.07.2024.**

## -: ಸುತ್ತೋಲೆ :-

ವಿಷಯ : ಡೆಂಗ್ಯೂ ಮುಂತಾದ ರೋಗಗಳ ಕುರಿತು ರಾಜ್ಯದ ಶಾಲೆಗಳಲ್ಲಿ ಕೈಗೊಳ್ಳಬೇಕಾದ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳ ಕುರಿತು.

ಉಲ್ಲೇಖ : 1) ಸಹನಿರ್ದೇಶಕರು, ನಿರ್ದೇಶಕರ ಕಛೇರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ: NVBDCP/IEC-4/2024-25 ದಿನಾಂಕ : 2.7.2024.

2) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂಖ್ಯೆ : NVBDCP/ENT/2024-25 ದಿನಾಂಕ : 27.6.2024.

- - -

ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದಲ್ಲಿ ಪ್ರಸ್ತುತ ಡೆಂಗ್ಯೂ, ಚಿಕೂನ್‌ಗುನ್ಯ ಹಾಗೂ ಜಿಕಾ ಮುಂತಾದ ರೋಗಗಳು ವ್ಯಾಪಕವಾಗಿ ಹರಡುತ್ತಿದ್ದು, ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಈ ರೋಗಗಳು ಹರಡದಂತೆ ನಿಯಂತ್ರಿಸಲು ಸಂಬಂಧಿಸಿದ ಇಲಾಖೆಗಳು ಮತ್ತು ಶಾಲೆಗಳು ಸೇರಿದಂತೆ ಸಮುದಾಯದ ಸಹಭಾಗಿತ್ವದಲ್ಲಿ ವಹಿಸಬೇಕಾದ ಮುಂಜಾಗ್ರತಾ ಕ್ರಮಗಳು ಹಾಗೂ ಈ ರೋಗಗಳ ಲಕ್ಷಣಗಳು ಕಂಡು ಬಂದಲ್ಲಿ ವಹಿಸಬೇಕಾದ ಅಗತ್ಯ ಕ್ರಮಗಳ ಕುರಿತು ವಿಸ್ತೃತವಾದ ಮಾರ್ಗಸೂಚಿಗಳನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯ ವತಿಯಿಂದ ಉಲ್ಲೇಖ (1) & (2) ರಂತೆ ಈಗಾಗಲೇ ಹೊರಡಿಸಲಾಗಿದೆ.

ಈ ಕುರಿತು ಶಾಲಾ ವಿದ್ಯಾರ್ಥಿಗಳ, ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಆರೋಗ್ಯ ಮತ್ತು ಸುರಕ್ಷತೆಯ ಹಿತದೃಷ್ಟಿಯಿಂದ ಈ ಕೆಳಕಂಡ ಅಗತ್ಯ ಕ್ರಮಗಳನ್ನು ಸಕಾಲದಲ್ಲಿ ತೆಗೆದುಕೊಳ್ಳಲು ಆಯಾ ಶಾಲೆಯ ಮುಖ್ಯೋಪಾಧ್ಯಾಯರು ಹಾಗೂ ಶೈಕ್ಷಣಿಕ ಉಸ್ತುವಾರಿ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಈ ಮೂಲಕ ಸೂಚಿಸಿದೆ.

1) ಶಾಲಾ ಆವರಣದಲ್ಲಿ ಹಾಗೂ ಸುತ್ತಮುತ್ತಲಿನ ಜಾಗಗಳಲ್ಲಿ ಮತ್ತು ಇಲ್ಲಿನ ಘನ ತ್ಯಾಜ್ಯ ವಸ್ತುಗಳಲ್ಲಿ ನೀರು ಶೇಖರಣೆಯಾಗದಂತೆ ಮುಂಜಾಗ್ರತಾ ಕ್ರಮಗಳನ್ನು ವಹಿಸತಕ್ಕದ್ದು. ಮತ್ತು ಇಂತಹ ಸನ್ನಿವೇಶಗಳ ಹತ್ತಿರ ಶಾಲಾ ವಿದ್ಯಾರ್ಥಿಗಳು ಸುತ್ತಾಡದಂತೆ ಅಗತ್ಯ ಮುನ್ನೆಚ್ಚರಿಕೆ ವಹಿಸತಕ್ಕದ್ದು ಹಾಗೂ ಇವುಗಳನ್ನು ತೆರವುಗೊಳಿಸಲು ಹಾಗೂ ವಿಲೇವಾರಿ ಮಾಡಲು ನಿಯಮಾನುಸಾರ ಅಗತ್ಯ ಕ್ರಮ ಕೈಗೊಳ್ಳತಕ್ಕದ್ದು.
2) ಇಂತಹ ಸಂದರ್ಭಗಳಲ್ಲಿ ಸ್ಥಳೀಯ ಗ್ರಾಮ ಪಂಚಾಯತಿ, ಪುರ ಸಭೆ, ನಗರ ಸಭೆ, ಮಹಾನಗರ ಪಾಲಿಕೆಗಳ (ಸ್ಥಳೀಯ ಸಂಸ್ಥೆಗಳ) ಹಾಗೂ ಸ್ಥಳೀಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆಯ ಸಹಕಾರದಿಂದ ಶಾಲಾ ಕಟ್ಟಡದಲ್ಲಿ ಅಥವಾ ಆವರಣದಲ್ಲಿ ಸಂಗ್ರಹವಾಗಿರುವ ನೀರನ್ನು ಹಾಗೂ ಇಂತಹ ಸನ್ನಿವೇಶಗಳನ್ನು ತೆರವುಗೊಳಿಸಲು ಮತ್ತು ಶಾಲಾ ಪರಿಸರಕ್ಕೆ ಸಾಂಕ್ರಾಮಿಕ ರೋಗ ನಿರೋಧಕ ದ್ರಾವಣಗಳನ್ನು ಕಾಲ-ಕಾಲಕ್ಕೆ ಸಿಂಪಡಿಸಲು ನಿಯಮಾನುಸಾರ ಅಗತ್ಯ ಕ್ರಮವಹಿಸತಕ್ಕದ್ದು.
3) ಶಾಲೆಗಳಲ್ಲಿನ ನೀರಿನ ಸಂಗ್ರಹಕಗಳನ್ನು (ತೊಟ್ಟಿ, ಬ್ಯಾರೆಲ್ ಇತ್ಯಾದಿ)ಗಳನ್ನು ವಾರಕ್ಕೊಮ್ಮೆ ಉಜ್ಜಿ, ತೊಳೆದು, ಖಾಲಿ ಮಾಡಿ. ಒಣಗಿಸಿ ಭರ್ತಿ ಮಾಡಿದ ನಂತರ ಭದ್ರವಾದ ಮುಚ್ಚಳದಿಂದ ಮುಚ್ಚುವುದು.

4) ಶಾಲೆಗಳಲ್ಲಿ ಪ್ರಾರ್ಥನೆ ಸಮಯದಲ್ಲಿ ಡೆಂಗ್ಯೂ ಹಾಗೂ ಇತರೆ ಸಾಂಕ್ರಾಮಿಕ ರೋಗಗಳ ಕುರಿತು ವಹಿಸಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಕುರಿತು ಹಾಗೂ ನಿಯಂತ್ರಣ ಕ್ರಮಗಳ ಕುರಿತು ಸ್ಥಳೀಯ ಆರೋಗ್ಯ ಸಿಬ್ಬಂದಿ / ಶಾಲಾ ಶಿಕ್ಷಕರ ಮೂಲಕ ವಿದ್ಯಾರ್ಥಿಗಳಿಗೆ ಆರೋಗ್ಯ ಶಿಕ್ಷಣ ನೀಡುವುದು.
5) ಈ ರೋಗಗಳ ಹರಡುವಿಕೆಯನ್ನು ತಡೆಗಟ್ಟಲು ವಹಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಮತ್ತು ನಿಯಂತ್ರಣದಲ್ಲಿ ವಿದ್ಯಾರ್ಥಿಗಳು ಹಾಗೂ ಸಮುದಾಯದ ಸಹಭಾಗಿತ್ವ ಹಾಗೂ ಪಾತ್ರದ ಕುರಿತು ಶಾಲೆಗಳಲ್ಲಿ ಭಾಷಣ ಸ್ಪರ್ಧೆ, ರಸಪ್ರಶ್ನೆ ಹಾಗೂ ಕಿರುನಾಟಕಗಳು ಇತ್ಯಾದಿ ಪಠ್ಯೇತರ ಚಟುವಟಿಕೆಗಳನ್ನು ಏರ್ಪಡಿಸಿ ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸುವುದು ಹಾಗೂ ಶಾಲೆಗಳಲ್ಲಿನ ಸೈನ್ಸ್ ಕ್ಲಬ್ ಚಟುವಟಿಕೆಗಳ ಮೂಲಕ ಇಂತಹ ಈ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವುದು ಹಾಗೂ ಈ ಮಾಹಿತಿಯು ವಿದ್ಯಾರ್ಥಿಗಳ ಮೂಲಕ ಪೋಷಕರ ಮತ್ತು ಪಾಲಕರ ಸಮುದಾಯಕ್ಕೆ ತಲುಪಿಸುವಂತೆ ತಿಳಿಸುವುದು.
6) ಒಂದು ವೇಳೆ ಶಾಲಾ ವಿದ್ಯಾರ್ಥಿಗಳಲ್ಲಿ ಇಂತಹ ಜ್ವರ ಪ್ರಕರಣಗಳು ವರದಿಯಾದಲ್ಲಿ ತಕ್ಷಣ ಅಂತಹ ವಿದ್ಯಾರ್ಥಿಯನ್ನು ಹತ್ತಿರದ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ಸೂಕ್ತ ಚಿಕಿತ್ಸೆಯನ್ನು ಕೊಡಿಸುವುದು ಮತ್ತು ಶುಶ್ರೂಷೆ ಮಾಡಿಸಲು ಅಗತ್ಯ ಕ್ರಮವಹಿಸುವುದು. ಒಂದು ವೇಳೆ ಶಾಲೆಗಳಲ್ಲಿ ಗುಂಪು ಜ್ವರ ಪ್ರಕರಣಗಳು ವರದಿಯಾದಲ್ಲಿ ಸ್ಥಳೀಯ, ತಾಲ್ಲೂಕು ಮತ್ತು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ತ್ವರಿತವಾಗಿ ಮಾಹಿತಿ ನೀಡಿ, ಹತ್ತಿರದ ಆರೋಗ್ಯ ಕೇಂದ್ರಕ್ಕೆ ದಾಖಲಿಸಿ ಸೂಕ್ತ ಚಿಕಿತ್ಸೆ ದೊರಕಲು ಮತ್ತು ಶುಶ್ರೂಷೆ ಮಾಡಿಸಲು ಅಗತ್ಯ ಕ್ರಮವಹಿಸತಕ್ಕದ್ದು. ಇಂತಹ ಸಂದರ್ಭಗಳಲ್ಲಿ ಅನಾರೋಗ್ಯ ಪೀಡಿತನಾಗಿರುವ ವಿದ್ಯಾರ್ಥಿಯ ಸಂಪರ್ಕಕ್ಕೆ ಬೇರೆ ವಿದ್ಯಾರ್ಥಿಗಳು ಬಾರದಂತೆ ಅಗತ್ಯ ಮುನ್ನೆಚ್ಚರಿಕೆವಹಿಸತಕ್ಕದ್ದು.

ಮೇಲ್ಕಂಡ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದರೊಂದಿಗೆ ಇಂತಹ ರೋಗಗಳಿಂದ ಯಾವುದೇ ವಿದ್ಯಾರ್ಥಿ ಅಥವಾ ವಿದ್ಯಾರ್ಥಿಗಳಿಗೆ ಇಂತಹ ಯಾವುದೇ ತೊಂದರೆ ಆಗದಂತೆ ಅಗತ್ಯ ಮುನ್ನೆಚ್ಚರಿಕಾ ಹಾಗೂ ಸುರಕ್ಷತಾ ಕ್ರಮಗಳನ್ನು ತೆಗೆದುಕೊಂಡು ಶಾಲೆಗಳನ್ನು ನಡೆಸಿಕೊಂಡು ಹೋಗುವಂತೆ ಈ ಮೂಲಕ ಸೂಚಿಸಿದೆ.

ಈ ಸಂಬಂಧ ಉಲ್ಲೇಖ-01 & 02 ರಲ್ಲಿನ ಅಂಶಗಳ ಪೈಕಿ ಶಾಲಾ ಶಿಕ್ಷಣ ಇಲಾಖೆಗೆ ಅನ್ವಯಿಸುವ ಅಂಶಗಳನ್ನು ಅನುಪಾಲಿಸಿ, ಸಮರ್ಪಕವಾಗಿ ಅನುಷ್ಠಾನಗೊಳಿಸಲು ನಿಯಮಾನುಸಾರ ಅಗತ್ಯ ಕ್ರಮಗಳನ್ನು ವಹಿಸತಕ್ಕದ್ದು. ಈ ಕುರಿತು ಸಮುದಾಯದ, ಸ್ಥಳೀಯ ಆರೋಗ್ಯ ಇಲಾಖೆ, ಸ್ಥಳೀಯ ಸಂಸ್ಥೆಗಳ ಮತ್ತು ತಾಲ್ಲೂಕು ಮತ್ತು ಜಿಲ್ಲಾಡಳಿತಗಳ ಸಹಕಾರ ಹಾಗೂ ಮಾರ್ಗದರ್ಶನದೊಂದಿಗೆ ಅಗತ್ಯ ಕ್ರಮಗಳನ್ನು ಸಕಾಲದಲ್ಲಿ ಕೈಗೊಳ್ಳುವುದು.

ಮುಂದುವರೆದು, ಇಂತಹ ಸನ್ನಿವೇಶಗಳಲ್ಲಿ ಮೇಲ್ಕಂಡ ನಿರ್ದೇಶನಗಳೊಂದಿಗೆ ಸರ್ಕಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಸಂಬಂಧಿಸಿದ ಇಲಾಖೆಗಳು, ಆಯಾ ಜಿಲ್ಲಾಡಳಿತಗಳು ಮತ್ತು ಸ್ಥಳೀಯ ಸಂಸ್ಥೆಗಳು ಕಾಲ-ಕಾಲಕ್ಕೆ ನೀಡುವ ಸೂಚನೆಗಳನ್ನು ಹಾಗೂ ನಿರ್ದೇಶನಗಳನ್ನು ಚಾಚೂ ತಪ್ಪದೇ ಪಾಲಿಸುವಂತೆ ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಮತ್ತು ರಾಜ್ಯದ ಎಲ್ಲಾ ಶಾಲೆಗಳ ಮುಖ್ಯ ಶಿಕ್ಷಕರಿಗೆ ಈ ಮೂಲಕ ತಿಳಿಸಲಾಗಿದೆ.

20.10.2010

ಬಿ. ಬಿ. ಕಾವೇರಿ., ಭಾ.ಆ.ಸೇ.
ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

ಗೆ :

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ) / (ಅಭಿವೃದ್ಧಿ), ಶಾಲಾ ಶಿಕ್ಷಣ ಇಲಾಖೆ.

2. ರಾಜ್ಯದ ಎಲ್ಲಾ ತಾಲ್ಲೂಕುಗಳ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ [ಆಯಾ ಜಿಲ್ಲಾ ಉಪನಿರ್ದೇಶಕರು(ಆಡಳಿತ) ರವರ ಮುಖಾಂತರ].
3. ರಾಜ್ಯದ ಎಲ್ಲಾ ಶಾಲೆಗಳ ಮುಖ್ಯಸ್ಥರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ).

**ಪ್ರತಿಯನ್ನು :**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ.
2) ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ಇವರಿಗೆ ಗೌರವ ಪೂರ್ವಕವಾಗಿ ಸಲ್ಲಿಸಿದೆ.
3) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ – ಕರ್ನಾಟಕ, ಬೆಂಗಳೂರು.
4) ಆಯುಕ್ತರು / ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ, ಆರೋಗ್ಯ ಸೌಧ, ಮಾಗಡಿ ರಸ್ತೆ, ಬೆಂಗಳೂರು
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
6) ರಾಜ್ಯದ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾ ಅಧಿಕಾರಿಗಳು, ಜಿಲ್ಲಾ ಪಂಚಾಯತಿ.
7) ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲ್ಬುರ್ಗಿ / ಧಾರವಾಡ.
8) ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
9) ಜಂಟಿ ನಿರ್ದೇಶಕರು(ಆಡಳಿತ), ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು.
10) ಉಪನಿರ್ದೇಶಕರು(ಯೋಜನೆ), ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ಬೆಂಗಳೂರು.
11) ಉಪನಿರ್ದೇಶಕರು, ಕ.ರಾ.ಶಿ.ಕ.ನಿಧಿ & ವಿ.ಕ್ಷೇ. ನಿಧಿ, ಶಿಕ್ಷಕರ ಸದನ, ಕೆ.ಜಿ. ರಸ್ತೆ, ಬೆಂಗಳೂರು.
12) ಕಛೇರಿ ಪ್ರತಿ.